**ದೋ.ಸಾ. :32 ಪ್ರಾ.ಸಾ. :14**

ಸಾಕ್ಷಿಯ ಹೆಸರು : ಮಲ್ಲಿಕಾರ್ಜುನ ಸರದಾರ

**ದಿನಾಂಕಃ 09–12–2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಆರೋಪಿ ಪರ ಎಲ್.ಎ.ಡಿ.ಸಿ ವಕೀಲರಿಂದಃ–**

ನನಗೆ ಕಾರವಾರದ ವೈದ್ಯಕೀಯ ವಿಜ್ಞಾನ ಸಂಸ್ಥೆಯ (KRIMS) ಗೆ ಹೋಗಲು ತನಿಖಾಧಿಕಾರಿಗಳು ಯಾವುದೇ ಲಿಖಿತ ಆದೇಶ ನೀಡಿಲ್ಲ. ಶವಪರೀಕ್ಷಾ ಕಾಲಕ್ಕೆ ಸಂಗ್ರಹಿಸಿದ ವಸ್ತುಗಳನ್ನು ಕಾರವಾರದ ವೈದ್ಯಕೀಯ ವಿಜ್ಞಾನ ಸಂಸ್ಥೆಯ (KRIMS) ಕೊಂಡೊಯ್ಯಲು ನನಗೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ, (KRIMS) ರವರಿಂದ ಯಾವುದೇ ಸ್ವೀಕೃತಿ ಪತ್ರವನ್ನು ಪಡೆದುಕೊಂಡು ಬಂದಿಲ್ಲ ಎಂದರೆ ಸರಿಯಲ್ಲ. ತನಿಖಾಧಿಕಾರಿಗಳ ಮುಂದೆ ಯಾವುದೇ ಹೇಳಿಕೆಯನ್ನು ನೀಡಿಲ್ಲ ಎಂದರೆ ಸರಿಯಲ್ಲ. ನಾನು ಮೇಲಾಧಿಕಾರಿಗಳ ಮಾತು ಕೇಳಿ, ಈ ಪ್ರಕರಣದಲ್ಲಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ– ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

*ಸಹಿ ಇದೆ.*

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ